ಕರ್ನಾಟಕ ಸರ್ಕಾರ

ಸಾರ್ವಜನಿಕ ಶಿಕ್ಷಣ ಇಲಾಖೆ, ಆಯುಕ್ತರ ಕಛೇರಿ, ನೃಪತುಂಗ ರಸ್ತೆ, ಬೆಂಗಳೂರು-560001.

ಸಂಖ್ಯೆ: ಸಿ7(8)/ಆರ್.ಟಿ.ಇ/ಶು.ಮ./ತಂ.ಬಿಡು/2020-21 ದಿನಾಂಕ: 20-03-2021

## ಸುತ್ತೋಲೆ

ವಿಷಯ : 2020-21ನೇ ಸಾಲಿನ ಎರಡನೇ ಕಂತಿನ ಆರ್.ಟಿ.ಇ. ಶುಲ್ಕ ಮರುಪಾವತಿಗೆ ಬೇಡಿಕೆ ಸಲ್ಲಿಸಲು ತಂತ್ರಾಂಶ ಬಿಡುಗಡೆ ಮಾಡಿರುವ ಬಗ್ಗೆ.

ಉಲ್ಲೇಖ : 1. ಈ ಕಛೇರಿ ಸುತ್ತೋಲೆ ಸಮ ಸಂಖ್ಯೆ ದಿನಾಂಕ : 02.01.2021

2. ಸರ್ಕಾರದ ಆದೇಶ ಸಂಖ್ಯೆ : ಇಪಿ 63 ಪಿಜಿಸಿ 2021 ದಿನಾಂಕ : 09.03.2021

* * * * * *

ಮೇಲ್ಕಂಡ ವಿಷಯಕ್ಕೆ ಸಂಬಂಧಿಸಿದಂತೆ 2020-21ನೇ ಸಾಲಿನ ಪ್ರಥಮ ಕಂತಿನ ಆರ್.ಟಿ.ಇ. ಶುಲ್ಕ ಮರುಪಾವತಿ ಮಂಜೂರಾದ ಶಾಲೆಗಳಿಗೆ ಎರಡನೇ ಕಂತಿನ ಶುಲ್ಕ ಮರುಪಾವತಿಗೆ ಬೇಡಿಕೆ ಸಲ್ಲಿಸಲು ತಂತ್ರಾಂಶ ಬಿಡುಗಡೆ ಮಾಡಿದ್ದು, ಬೇಡಿಕೆ ಸಲ್ಲಿಸಲು ಅನುಸರಿಸಬೇಕಾದ ಕ್ರಮಗಳು ಕೆಳಕಂಡಂತಿದೆ.

1. ಉಲ್ಲೇಖ (2)ರ ಸರ್ಕಾರದ ಆದೇಶದಂತೆ 2020-21ರ ಎರಡನೇ ಕಂತಿನ ಶುಲ್ಕ ಮರುಪಾವತಿಗೆ ತಂತ್ರಾಂಶದಲ್ಲಿ ಆರ್.ಟಿ.ಇ. ವಿದ್ಯಾರ್ಥಿಗಳ ಹಾಜರಾತಿ ಮತ್ತು ಶೈಕ್ಷಣಿಕ ಪ್ರಗತಿ ನಮೂದು ಮಾಡುವುದರಿಂದ ವಿನಾಯಿತಿ ನೀಡಿದೆ.
2. ಶಾಲೆಗಳು ತಂತ್ರಾಂಶದಲ್ಲಿ ಲಾಗಿನ್ ಆಗಿ ಎಲ್ಲಾ ಅರ್ಹ ಆರ್.ಟಿ.ಇ. ವಿದ್ಯಾರ್ಥಿಗಳ ವಿವರಗಳು ಇರುವ ಬಗ್ಗೆ ಖಾತ್ರಿಪಡಿಸಿಕೊಂಡು ಬೇಡಿಕೆ ಸಲ್ಲಿಸುವುದು.
3. ಶಾಲೆಗಳು ತಂತ್ರಾಂಶದಲ್ಲಿ ಸಲ್ಲಿಸಿದ ಬೇಡಿಕೆಗಳನ್ನು ಕ್ಷೇತ್ರ ಶಿಕ್ಷಣಾಧಿಕಾರಿಗಳು ಪರಿಶೀಲಿಸಿ ಎಲ್ಲಾ ಅರ್ಹ ಆರ್.ಟಿ.ಇ. ವಿದ್ಯಾರ್ಥಿಗಳ ವಿವರಗಳು ಇರುವುದನ್ನು ಖಾತ್ರಿಪಡಿಸಿಕೊಂಡು ಅನುಮೋದನೆ ನೀಡಿ ಮುಂದಿನ ಹಂತಕ್ಕೆ ಸಲ್ಲಿಸುವುದು.
4. ಕ್ಷೇತ್ರ ಶಿಕ್ಷಣಾಧಿಕಾರಿಗಳು ಅನುಮೋದನೆ ನೀಡಿದಂತಹ ಎರಡನೇ ಕಂತಿನ ಶುಲ್ಕ ಮರುಪಾವತಿ ಬೇಡಿಕೆಗಳನ್ನು ಉಪನಿರ್ದೇಶಕರು ಪರಿಶೀಲಿಸಿ ಸರಿಯಿದ್ದಲ್ಲಿ ಅನುಮೋದನೆ ನೀಡಿ, ಕೂಡಲೇ ಪೇ ಆರ್ಡರ್ ಜನರೇಟ್ ಮಾಡಿ ಶಾಲೆಗಳ ಬ್ಯಾಂಕ್ ಖಾತೆಗೆ ಮರುಪಾವತಿ ಮೊಬಲಗನ್ನು ಸಂದಾಯಿಸಲು ಕ್ರಮವಹಿಸುವುದು.

ಆಯುಕ್ತರು

ಸಾರ್ವಜನಿಕ ಶಿಕ್ಷಣ ಇಲಾಖೆ

**ಇವರಿಗೆ,**

1. ರಾಜ್ಯದ ಎಲ್ಲಾ ಜಿಲ್ಲಾ ಉಪನಿರ್ದೇಶಕರು(ಆಡಳಿತ), ಸಾರ್ವಜನಿಕ ಶಿಕ್ಷಣ ಇಲಾಖೆ, ಇವರಿಗೆ ಸೂಕ್ತ ಕ್ರಮಕ್ಕಾಗಿ
2. ರಾಜ್ಯದ ಎಲ್ಲಾ ಕ್ಷೇತ್ರ ಶಿಕ್ಷಣಾಧಿಕಾರಿಗಳು, ಸಾರ್ವಜನಿಕ ಶಿಕ್ಷಣ ಇಲಾಖೆ, ಇವರಿಗೆ ಸೂಕ್ತ ಕ್ರಮಕ್ಕಾಗಿ.
3. ಹಿರಿಯ ಸಹಾಯಕ ನಿರ್ದೇಶಕರು, ಇ-ಆಡಳಿತ ಶಾಖೆ, ಆಯುಕ್ತರ ಕಚೇರಿ, ಬೆಂಗಳೂರು ಇವರಿಗೆ ಅಗತ್ಯ ಕ್ರಮಕ್ಕಾಗಿ
4. ಸಂಬಂಧಿಸಿದ ಖಾಸಗಿ ಅನುದಾನ ರಹಿತ ಶಾಲೆಗಳ ಮುಖ್ಯಸ್ಥರಿಗೆ, ಕ್ಷೇತ್ರ ಶಿಕ್ಷಣಾಧಿಕಾರಿಗಳ ಮೂಲಕ

**ಪ್ರತಿಯನ್ನು,**

1. ಅಪರ ಆಯುಕ್ತರು, ಸಾರ್ವಜನಿಕ ಶಿಕ್ಷಣ ಇಲಾಖೆ, ಕಲಬುರಗಿ, ಇವರಿಗೆ ಮಾಹಿತಿಗಾಗಿ
2. ಅಪರ ಆಯುಕ್ತರು, ಸಾರ್ವಜನಿಕ ಶಿಕ್ಷಣ ಇಲಾಖೆ, ಧಾರವಾಡ, ಇವರಿಗೆ ಮಾಹಿತಿಗಾಗಿ